# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 137

05–04–2021 ರಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಂಖ್ಯೆ: 137 ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ–ಬೊಮ್ಮನಹಳ್ಳಿ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10–09–2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿಯ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ.ಮೊಹಮದ್ ಜಾವೀದ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

## <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು</u>

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ಹಿಂದಿನ ಸಭೆಯಲ್ಲಿ ಘನತ್ಯಾಜ್ಯ ವಿಲೇವಾರಿಯ ಬಗ್ಗೆ ತೆಗೆದುಕೊಂಡ ನಿರ್ಣಯದಂತೆ ಕಿರಿಯ ಆರೋಗ್ಯ ಪರಿವೀಕ್ಷಕರನ್ನು ವಿವರಣೆ ನೀಡುವಂತೆ ಸಭೆಯಲ್ಲಿ ಕೋರಿದರು ಮತ್ತು ಪೌರ ಕಾರ್ಮಿಕರ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ಮುಂದಿಡುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ಸಭೆಯಲ್ಲಿ ಕೈಗೊಂಡ ಕ್ರಮದ ಬಗ್ಗೆ ವಿವರವಾಗಿ ತಿಳಿಸಿದರು ಹಾಗೂ ಮುಂದಿನ ದಿನಗಳಲ್ಲಿ ಕಟ್ಟು ನಿಟ್ಟಿನ ಕ್ರಮ ಕೈಗೊಂಡು ಕಸದ ವಿಂಗಡನೆ, ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸದಸ್ಯರು ರವರು 2021-22ನೇ ಸಾಲಿನಲ್ಲಿ ಕಾಮಗಾರಿಗಳನ್ನು ನಿರ್ವಹಿಸುವ ಬಗ್ಗೆ ಸಭೆಯಲ್ಲಿ ವಿಷಯ ಮಂಡಣೆ ಮಾಡಿದರು ಹಾಗೂ 2021-22ನೇ ಸಾಲಿನ ಅಯವ್ಯಯದ ಬಗ್ಗೆ ಸಭೆಯಲ್ಲಿ ಪ್ರಾಸ್ತಪಿಸಿದರು.

ಸದರಿ ವಿಷಯದ ಬಗ್ಗೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ 2021-22ನೇ ಸಾಲಿನ ಅಯವ್ಯಯದ ಅಂದಾಜುಗಳ ಅನುಸೂಚಿಗಳು ಪುಸ್ತಕ ಬಿಡುಗಡೆಯಾಗಿದ್ದು ಮಾರ್ಪಡಿನೊಂದಿಗೆ ಸರ್ಕಾರದ ಅನುಮೋದನೆಯ ನಂತರ 2021-22ನೇ ಸಾಲಿನ ಅಯವ್ಯಯದ ಪುಸ್ತಯದಲ್ಲಿ ವಾರ್ಡ್‌ಗಳಿಗೆ ನಿಗಧಿಪಡಿಸಿದ ಅನುದಾನದಲ್ಲಿ ಕ್ರಿಯಾ ಯೋಜನೆಯ ನಂತರ ಪರಿಶೀಲಿಸಿ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸಮಿತಿಯ ಸದಸ್ಯರು 2019-20, 2020-2021ನೇ ಸಾಲಿನಲ್ಲಿ ಸಾಲಿನಲ್ಲಿ ಕಲ್ಯಾಣ ಕಾರ್ಯಕ್ರಮಗಳಡಿಯಲ್ಲಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದ ಬಗ್ಗೆ ಸಭೆಯಲ್ಲಿ ವಿಷಯವನ್ನು ಮಂಡಿಸಿದರು.

ಅಧ್ಯಕ್ಷರು 2019-20 ಮತ್ತು 2020-21ನೇ ಸಾಲಿನಲ್ಲಿ ಅರ್ಜಿಸಲ್ಲಿಸಿದ್ದು ಕರೋನ-19 ಸೋಂಕಿನಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ, ಈ ಬಗ್ಗೆ ಮುಂದಿನ ದಿನಗಳಲ್ಲಿ ಕಲ್ಯಾಣಧಿಕಾರಿಗಳನ್ನು ಸಂಪರ್ಕಿಸಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಚರ್ಚಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಪರಿಶಿಷ್ಟ ಜಾತಿ/ ಪಂಗಡ ಮತ್ತು ಹಿಂದುಳಿದ ಅಲ್ಪಸಂಖ್ಯಾತರಿಗೆ 2020-21ನೇ ಸಾಲಿನಲ್ಲಿ ಪ್ರತಿ ವಾರ್ಡ್‌ಗೆ 10 ಮನೆಗಳನ್ನು ನಿರ್ಮಾಣ ಮಾಡಲು ಅಯವ್ಯಯ ಪುಸ್ತಕದಲ್ಲಿ ಅನುದಾನ ಮೀಸಲಿರಿಸಿದ್ದು ಇದುವರೆವಿಗೂ ವಾರ್ಡ್-136ರ ವ್ಯಾಪ್ತಿಯಲ್ಲಿ ಯಾವುದೇ ಅನುದಾನ ಬಿಡುಗಡೆಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಿಸೆಂಬರ್ ಸಭೆಯಲ್ಲಿ 10 ಜನ ಫಲಾನುಭವಿಗಳನ್ನು ಗುರ್ತಿಸಿ ಅನುದಾನ ಬಿಡುಗಡೆ ಮಾಡಲು ಸಭಾ ನಿರ್ಣಯವನ್ನು ಕೈಗೊಂಡು ಕಡತವನ್ನು ಸಂಬಂದಿಸಿದ ಕಛೇರಿಗೆ ಕಳುಹಿಸಲಾಗಿದ್ದು ಷಕ್ಷಮ ಪ್ರಾಧಿಕಾರದ ಅನುಮೊದನೆಯ ನಂತರ ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಲು ಕಾರ್ಯದೇಶ ನೀಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೆರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಬೇಸಿಗೆ ಕಾಲದಲ್ಲಿ ಸಾರ್ವಜನಿಕರಿಗೆ ಹೆಚ್ಚನ ಕುಡಿಯುವ ನೀರಿನ ಅವಶ್ಯಕವಾಗಿರುವುದರಿಂದ ದಿನ ಮತ್ತು ಸಮಯವನ್ನು ನಿಗಧಿ ಮಾಡಿ ಉತ್ತಮವಾಗಿ ನೀರು ಪೂರೈಕೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿರು.

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು: ಬೆಸ್ಕಂ ಕಛೆರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಪುಸ್ತಕವನ್ನು ಮತ್ತು ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಬೆಸ್ಕಂ ಪ್ರತಿನಿಧಿಗೆ ತಿಳಿಸಿದರು

ಬೆಸ್ಕಂ ಪ್ರತಿನಿಧಿಯು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಮರ್ಪಕವಾಗಿ ವಿದ್ಯೂತ್ ಪೂರೈಕೆಯನ್ನು ಸರಬರಾಜು ಮಾಡುತ್ತಿರುವುದಾಗಿ ಸಭೆಯಲ್ಲಿ ಅಧ್ಯಕ್ಷರಿಗೆ ತಿಳಿಸಿದರು.

ಅಧ್ಯಕ್ಷರು: ವೈದ್ಯಾಧಿಕಾರಿಗಳ ಪ್ರತಿ ನಿಧಿಗಳಿಗೆ ಸರ್ಕಾರದ ಆದೇಶದಂತೆ ಏಪ್ರಿಲ್–1 ರಿಂದ 45 ವರ್ಷ ಮೆಲ್ಪಟ್ಟವರಿಗೆ ಕೊವಿಡ್–19 ಸೊಂಕು ಹರಡದಂತೆ ಲಸಿಕೆ ನೀಡುತ್ತಿರುವುದರ ಬಗ್ಗೆ ಸಭೆಯಲ್ಲಿ ತಿಳಿಸುವಂತೆ ಸೂಚಿಸಿದರು.

–4

ವೈದ್ಯಾಧಿಕಾರಿಗಳ ಪ್ರತಿ ನಿಧಿಯು ಅನ್‌ಲೈನ್ ಮತ್ತು ಅಫ್ ಲೈನಲ್ಲಿ ಕರೋನ-19 ಅಪ್ ನಲ್ಲಿ ಲಸಿಕೆಯನ್ನು ಪಡೆಯಲು ನೊಂದಣಿ ಮಾಡಿಕೊಂಡ ನಂತರ ದಿನ ನಿಗಧಿ ಪಡಿಸಿ ಲಸಿಕೆಯನ್ನು ನೀಡುತ್ತೀರುವುದಾಗಿ ಸಭೆಯಲ್ಲಿ ತಿಳಿಸಿದರು ಹಾಗೂ ವಾರ್ಡ್ –137ಕ್ಕೆ ಸಂಬಂಧಿಸಿದಂತೆ ನೇರವಾಗಿ ಜೆ.ಜೆ.ಆರ್ ನಗರ ಅಸ್ಪತ್ರೆಗೆ ಬೇಟಿ ನೀಡಿ ಆಧಾರ್ ಕಾರ್ಡ್ ಮತ್ತು ಇತರೆ ದಾಖಲೆಗಳನ್ನು ತೋರಿಸಿ ಲಸಿಕೆ ಲಸಿಕೆ ಪಡೆಯಬಹುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಕಂದಾಯ ಇಲಾಖೆಯ ಕಂದಾಯ ಪರಿವೀಕ್ಷಕರಿಗೆ ತಮ್ಮ ಪರಿವೀಕ್ಷಣೆಯಲ್ಲಿ ಭೂತ್ ಮಟ್ಟದ ಅಧಿಕಾರಿಗಳಿಂದ ಎರಡನೇ ಹಂತದ ಕರೋನದ ಬಗ್ಗೆ ಜನರಲ್ಲಿ ಜಾಗೃತಿ ನೀಡಲು ಮತ್ತು ಕರೋನ ಕಂಡುಬಂದಲ್ಲಿ ಮೊದಲನೇ ಹಂತ ಮತ್ತು ಎರಡನೇ ಹಂತದ ಸಂಪರ್ಕಿತರನ್ನು ಗುರುತಿಸಲು ಸಭೆಯಲ್ಲಿ ತಿಳಿಸಿದರು.

ಕಂದಾಯ ಪರಿವೀಕ್ಷಕರು ಪ್ರತಿನಿತ್ಯ ಭೂತ್ ಮಟ್ಟದ ಅಧಿಕಾರಿಗಳು ದಿನ ಕಛೇರಿಗೆ ಹಾಜರಾಗಿ ಸೊಂಕಿನ ಬಗ್ಗೆ ಹರಿವು ಮತ್ತು ಮೊದಲನೆ ಮತ್ತು ಎರಡನೇ ಹಂತದ ಸಂಪರ್ಕಿತರನ್ನು ಗುರ್ತಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

## ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು( ಘ.ತ್ಯಾ.ನಿ–ಬೊಮ್ಮನಹಳ್ಳಿ) ಬಿ.ಬಿ.ಎಂ.ಪಿ, ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೂಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ, ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –137 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್–137, ದೂ. 9342582372 | ಸದಸ್ಯರು | [signature] |

| | | | |
|---|---|---|---|
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686418488 | ಸದಸ್ಯರು | |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845802912 | ಸದಸ್ಯರು | |
| 7 | ಶ್ರೀ ರಿಜ್ವಾನ್, ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | |
| 8 | ಶ್ರೀ ರಾಜು, ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | |
| 9 | ಶ್ರೀಮತಿ ಆಶಾ. ದೂ. 9731317223 ಕಂದಾಯ ಪರಿವೀಕ್ಷಕರು | ಸದಸ್ಯರು | RI-137 |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಶ್ರೀ ಹನುಮಂತ ರಾಜು. ದೂ. 8618556909 | ಸದಸ್ಯರು | |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೇಸ್ಕಂ) ರವರ ಪ್ರತಿನಿಧಿ. ದೂ. 9449840364 | ಸದಸ್ಯರು | |

**ಕಾರ್ಯದರ್ಶಿಗಳು**
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 137
ವಾರ್ಡ್ ಹಂತದ ಸಮೀತಿ

**ಅಧ್ಯಕ್ಷರು**
**ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137**

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ.